**All India Radio: Bangalore**
**National Bulletin In Kannada**
**16.07.2025  19.35 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**16.07.2025  19.35 p.m.**
**<><><><>**

ಮುಖ್ಯಾಂಶಗಳು

1. ಕೃಷಿ ಉತ್ಪಾದಕತೆ ಹೆಚ್ಚಿಸಲು ಪ್ರಧಾನಮಂತ್ರಿ ಧನ್ ಧಾನ್ಯ ಕೃಷಿ ಯೋಜನೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ
2. ನವದೆಹಲಿಯಲ್ಲಿ ನಾಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಪ್ರತಿಷ್ಠಿತ ಸ್ವಚ್ಛ ಸರ್ವೇಕ್ಷಣ ಪ್ರಶಸ್ತಿ ಪ್ರದಾನ
3. ಇದೇ ೨೧ ರಿಂದ ಸಂಸತ್‌ನ ಮುಂಗಾರು ಅಧಿವೇಶನ ಆರಂಭ ಹಿನ್ನೆಲೆ ; ಇದೇ ಭಾನುವಾರ ಸರ್ವಪಕ್ಷ ಸಭೆ
4. ಮಹಿಳಾ ಏಕದಿನ ಕ್ರಿಕೆಟ್  ; ಭಾರತದ ವಿರುದ್ಧ ಟಾಸ್ ಗೆದ್ದ ಇಂಗ್ಲೆಂಡ್ ಬ್ಯಾಟಿಂಗ್

<><><><>

ಕೃಷಿ ಉತ್ಪಾದಕತೆಯನ್ನು ಹೆಚ್ಚಿಸಲು ಪ್ರಧಾನ ಮಂತ್ರಿ ಧನ್-ಧಾನ್ಯ ಕೃಷಿ ಯೋಜನೆಯನ್ನು ಕೇಂದ್ರ ಸಚಿವ ಸಂಪುಟ ಅನುಮೋದಿಸಿದೆ. ಬೆಳೆ ವೈವಿಧ್ಯೀಕರಣ ಮತ್ತು ಸುಸ್ಥಿರ ಕೃಷಿ ಪದ್ಧತಿಗಳನ್ನು ಹೆಚ್ಚಿಸುವುದು, ಕೊಯ್ಲಿನ ನಂತರದ ಸಂಗ್ರಹಣೆಯನ್ನು ಹೆಚ್ಚಿಸುವುದು, ನೀರಾವರಿ ಸೌಲಭ್ಯಗಳನ್ನು ಸುಧಾರಿಸುವುದು ಮತ್ತು ಸಾಲ ಲಭ್ಯತೆಯನ್ನು ಸುಗಮಗೊಳಿಸುವ ಗುರಿಯನ್ನು ಈ ಯೋಜನೆ ಹೊಂದಿದೆ ಎಂದು ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಇಂದು ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಯೋಜನೆಯು ದೇಶದ ಒಂದು ಕೋಟಿ ೭೦ ಲಕ್ಷ ರೈತರಿಗೆ ಸಹಾಯ ಮಾಡುತ್ತದೆ ಎಂದರು. ಕಡಿಮೆ ಉತ್ಪಾದಕತೆ, ಕಡಿಮೆ ಬೆಳೆ ತೀವ್ರತೆ ಮತ್ತು ಕಡಿಮೆ ಸಾಲ ವಿತರಣೆ ಎಂಬ ಮೂರು ಪ್ರಮುಖ ಸೂಚಕಗಳನ್ನು ಆಧರಿಸಿ ಈ ಯೋಜನೆಯಡಿಯಲ್ಲಿ ದೇಶದಲ್ಲಿ ನೂರು ಜಿಲ್ಲೆಗಳನ್ನು ಗುರುತಿಸಲಾಗುವುದು. ಈ ಯೋಜನೆಯನ್ನು ಹನ್ನೊಂದು ಇಲಾಖೆಗಳು ಮತ್ತು ಇತರ ರಾಜ್ಯ ಯೋಜನೆಗಳಲ್ಲಿ ಅಸ್ತಿತ್ವದಲ್ಲಿರುವ ೩೬ ಯೋಜನೆಗಳ ಒಗ್ಗೂಡುವಿಕೆಯ ಮೂಲಕ ಕಾರ್ಯಗತಗೊಳಿಸಲಾಗುವುದು ಎಂದು ಅವರು ಹೇಳಿದರು.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನವದೆಹಲಿಯಲ್ಲಿ ನಾಳೆ ೨೦೨೪-೨೫ನೇ ಸಾಲಿನ ಪ್ರತಿಷ್ಠಿತ ಸ್ವಚ್ಛ ಸರ್ವೇಕ್ಷಣ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. 'ಸ್ವಚ್ಛ ಭಾರತ ನಗರ ಮಿಷನ್' ನಗರಗಳ ನಿರಂತರ ಪ್ರಯತ್ನಗಳನ್ನು ಗುರುತಿಸುತ್ತದೆ. ಈ ವರ್ಷ, ಸೂಪರ್ ಸ್ವಚ್ಛ ಲೀಗ್ ನಗರಗಳು ಮತ್ತು ಐದು ಜನಸಂಖ್ಯೆ ವಿಭಾಗಗಳಲ್ಲಿ ಅಗ್ರ ಮೂರು ಸ್ವಚ್ಛ ನಗರಗಳು ಸೇರಿದಂತೆ ನಾಲ್ಕು ವಿಭಾಗಗಳಲ್ಲಿ ಪ್ರಶಸ್ತಿಗಳನ್ನು ನೀಡಲಾಗುತ್ತಿದೆ.  ಈ ವರ್ಷ ಒಟ್ಟು ೭೮ ಪ್ರಶಸ್ತಿಗಳನ್ನು ನೀಡಲಾಗುವುದು ಎಂದು ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ ತಿಳಿಸಿದೆ.  ಸ್ವಚ್ಛ ಸರ್ವೇಕ್ಷಣ ೨೦೨೪-೨೫ ನಗರ ಸ್ವಚ್ಛತೆ ಮತ್ತು ಸೇವಾ ವಿತರಣೆಯನ್ನು ನಿರ್ಣಯಿಸಲು ಸ್ಮಾರ್ಟ್, ರಚನಾತ್ಮಕ ವಿಧಾನವನ್ನು ಅಳವಡಿಸಿಕೊಂಡಿದೆ. ಇದು ನಗರಗಳಲ್ಲಿ ನೈರ್ಮಲ್ಯ ಮತ್ತು ತ್ಯಾಜ್ಯ ನಿರ್ವಹಣೆಯ ಸಂಪೂರ್ಣ ನೋಟವನ್ನು ನೀಡುತ್ತದೆ ಎಂದು ಸಚಿವಾಲಯ ತಿಳಿಸಿದೆ.

<><><><>

ಬರುವ ಸೋಮವಾರದಿಂದ ಸಂಸತ್ತಿನ ಮುಂಗಾರು ಅಧಿವೇಶನ ಆರಂಭವಾಗಲಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಇದೇ ಭಾನುವಾರ ಸರ್ವಪಕ್ಷಗಳ ಸಭೆ ಕರೆದಿದೆ. ಸಭೆಯಲ್ಲಿ, ಸರ್ಕಾರ ಸಂಸತ್ತಿನ ಉಭಯ ಸದನಗಳ ಸುಗಮ ಕಲಾಪಕ್ಕೆ ಪ್ರತಿಪಕ್ಷಗಳ ಸಹಕಾರವನ್ನು ಕೋರಲಿದೆ.  ಸಂಸತ್ತಿನ ಮುಂಗಾರು ಅಧಿವೇಶನ, ಇದೇ ೨೧ ರಿಂದ ಆರಂಭವಾಗಲಿದ್ದು, ಆಗಸ್ಟ್ ೨೧ರವರೆಗೆ ನಡೆಯಲಿದೆ. ಈ ವೇಳೆ, ಹಲವು ಮಹತ್ವದ ಮಸೂದೆಗಳ ಕುರಿತು ಚರ್ಚಿಸಿ, ಅಂಗೀಕಾರ ನೀಡುವುದು ಕಲಾಪ ಪಟ್ಟಿಯಲ್ಲಿ ಸೇರಿದೆ.

<><><><>

ರಾಷ್ಟ್ರವ್ಯಾಪಿ ಹಣಕಾಸು ಸೇರ್ಪಡೆ ಸ್ಯಾಚುರೇಶನ್ ಅಭಿಯಾನದಡಿಯಲ್ಲಿ ಎರಡು ವಾರಗಳಲ್ಲಿ ಒಂದು ಲಕ್ಷ ೪೦ ಸಾವಿರ ಜನಧನ್ ಖಾತೆಗಳನ್ನು ತೆರೆಯಲಾಗಿದೆ ಎಂದು ಸರ್ಕಾರ ತಿಳಿಸಿದೆ. ಹಲವಾರು ಪ್ರಮುಖ ಯೋಜನೆಗಳ ವ್ಯಾಪ್ತಿಯನ್ನು ಹೆಚ್ಚಿಸಲು ಹಣಕಾಸು ಸಚಿವಾಲಯವು ಈ ತಿಂಗಳ ೧ ರಿಂದ ಜಾರಿಗೆ ಬರುವ ಮೂರು ತಿಂಗಳ ರಾಷ್ಟ್ರವ್ಯಾಪಿ ಸ್ಯಾಚುರೇಶನ್ ಅಭಿಯಾನ ಪ್ರಾರಂಭಿಸಿದೆ. ಪ್ರಧಾನ ಮಂತ್ರಿ ಜನಧನ್ ಯೋಜನೆ, ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ, ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ ಮತ್ತು ಅಟಲ್ ಪಿಂಚಣಿ ಯೋಜನೆಗಳು ಈ ಅಭಿಯಾನದಲ್ಲಿ ಸೇರಿವೆ. ಎಲ್ಲಾ ಗ್ರಾಮ ಪಂಚಾಯತ್‌ಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಮಗ್ರ ವ್ಯಾಪ್ತಿಯನ್ನು ಸಾಧಿಸಲು ಪ್ರಯತ್ನಿಸುತ್ತದೆ. ಅಭಿಯಾನ ಪ್ರಾರಂಭಿಸಿದಾಗಿನಿಂದ, ಫಲಾನುಭವಿಗಳ ದಾಖಲಾತಿಗೆ ಅನುಕೂಲವಾಗುವಂತೆ ವಿವಿಧ ಜಿಲ್ಲೆಗಳಲ್ಲಿ ಒಟ್ಟು ೪೩ ಸಾವಿರಕ್ಕೂ ಹೆಚ್ಚು ಶಿಬಿರಗಳನ್ನು ನಡೆಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ.  ಕೊನೆಯ ಹಂತದ ಆರ್ಥಿಕ ಸಬಲೀಕರಣ ಖಚಿತಪಡಿಸಿಕೊಳ್ಳಲು ಸುಮಾರು ಎರಡು ಲಕ್ಷ ೭೦ ಸಾವಿರ ಗ್ರಾಮ ಪಂಚಾಯತ್‌ಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳನ್ನು ಒಳಗೊಂಡ ಅಭಿಯಾನವು ಸೆಪ್ಟೆಂಬರ್ ೩೦ರವರೆಗೆ ಮುಂದುವರಿಯಲಿದೆ.

<><><><>

ಭಾರತದಲ್ಲಿ ಉ? ವಿದ್ಯುತ್ ಉತ್ಪಾದನಾ ಸಾಮರ್ಥ್ಯಗಳನ್ನು ಸ್ಥಾಪಿಸುವ ಹೂಡಿಕೆಗಳು ಹಿಂದಿನ ಮೂರು ಹಣಕಾಸು ವ?ಗಳಿಗೆ ಹೋಲಿಸಿದರೆ ೨೦೨೮ ರವರೆಗಿನ ಮೂರು ಹಣಕಾಸು ವ?ಗಳಲ್ಲಿ ದ್ವಿಗುಣಗೊಂಡು ೨.೩ ಲಕ್ಷ ಕೋಟಿ ರೂಪಾಯಿಗಳಿಗೆ ತಲುಪಲಿವೆ ಎಂದು ವರದಿಯೊಂದು ತಿಳಿಸಿದೆ. ಭಾರತದಲ್ಲಿ ಹೆಚ್ಚುತ್ತಿರುವ ಇಂಧನ ಬೇಡಿಕೆ ಮತ್ತು ಬೇಸ್ ಲೋಡ್ ವಿದ್ಯುತ್ ಅಗತ್ಯವನ್ನು ಪೂರೈಸಲು ಸಹಾಯ ಮಾಡಲು ಈ ವಿಭಾಗದ ಮೇಲೆ ಹೆಚ್ಚಿನ ಗಮನ ನೀಡಲಾಗುತ್ತಿದೆ ಎಂದು ಕ್ರಿಸಿಲ್ ರೇಟಿಂಗ್ಸ್ ತಿಳಿಸಿದೆ.

<><><><>

ಜಪಾನ್‌ಗೆ ತಮ್ಮ ಅಧಿಕೃತ ಭೇಟಿಯ ಎರಡನೇ ದಿನದಂದು, ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್, ಟೋಕಿಯೊದಲ್ಲಿ ಜಪಾನಿನ ಪ್ರಮುಖ ಕಂಪನಿಗಳೊಂದಿಗೆ ಉನ್ನತ ಮಟ್ಟದ ಸಭೆಗಳನ್ನು ನಡೆಸಿದರು.  ಇದೇ ಸಂದರ್ಭದಲ್ಲಿ ೧೬ನೇ ಇಂಡಿಯಾ ಟ್ರೆಂಡ್ ಫೇರ್ ೨೦೨೫ ಅನ್ನು ಉದ್ಘಾಟಿಸಿದರು. ಈ ಮೇಳವು ಭಾರತೀಯ ಜವಳಿ ರಫ್ತುದಾರರು ಜಪಾನಿನ ಖರೀದಿದಾರರೊಂದಿಗೆ ನೇರವಾಗಿ ಸಂಪರ್ಕ ಸಾಧಿಸಲು ಅತಿದೊಡ್ಡ ವೇದಿಕೆಗಳಲ್ಲಿ ಒಂದಾಗಿದೆ ಮತ್ತು ದ್ವಿಪಕ್ಷೀಯ ಜವಳಿ ವ್ಯಾಪಾರವನ್ನು ಮತ್ತ? ಆಳಗೊಳಿಸುವ ನಿರೀಕ್ಷೆಯಿದೆ. ಭಾರತದಲ್ಲಿ ಕಾರ್ಯಾಚರಣೆಗಳನ್ನು ವಿಸ್ತರಿಸಲು ಮತ್ತು ಇಎಸ್‌ಜಿ ಮತ್ತು ಸುಸ್ಥಿರತೆಯ ಗುರಿಗಳಿಗೆ ಕೊಡುಗೆ ನೀಡಲು ಅವರು ಜಪಾನಿನ ಕಂಪನಿಗಳನ್ನು ಆಹ್ವಾನಿಸಿದರು.

<><><><>

ಗಗನಯಾತ್ರಿ ಶುಭಾಂಶು ಶುಕ್ಲಾ ಅವರ ಬಾಹ್ಯಾಕಾಶ ಪ್ರಯಾಣವನ್ನು ಶ್ಲಾಘಿಸುವ ನಿರ್ಣಯವನ್ನು ಕೇಂದ್ರ ಸಚಿವ ಸಂಪುಟ ಅಂಗೀಕರಿಸಿದೆ. ಭಾರತದ ಅನಂತ ಆಕಾಂಕ್ಷೆಗಳನ್ನು ಪ್ರತಿನಿಧಿಸುವ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರು ತಮ್ಮ

ಬಾಹ್ಯಾಕಾಶ ಪ್ರಯಾಣದಿಂದ ನಿನ್ನೆ ಸುರಕ್ಷಿತವಾಗಿ ಭೂಮಿಗೆ ಮರಳಿದರು. ಸಚಿವಾಲಯ ಸಭೆಯ ನಂತರ ನವದೆಹಲಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶುಭಾಂಶು ಶುಕ್ಲಾ ಅವರ ಬಾಹ್ಯಾಕಾಶ ಯಾನವು ಭಾರತವನ್ನು ತನ್ನದೇ ಆದ ಬಾಹ್ಯಾಕಾಶ ನಿಲ್ದಾಣವನ್ನು ಸಾಕಾರಗೊಳಿಸುವತ್ತ ಒಂದು ಹೆಜ್ಜೆ ಹತ್ತಿರಕ್ಕೆ ಕೊಂಡೊಯ್ದಿತು ಎಂದು ಅಭಿಪ್ರಾಯಪಟ್ಟರು. ಈ ಸಾಧನೆಯನ್ನು ಸಾಧ್ಯವಾಗಿಸಿದ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಮತ್ತು ವಿಜ್ಞಾನಿಗಳು ಮತ್ತು ಎಂಜಿನಿಯರ್‌ಗಳ ಸಂಪೂರ್ಣ ಸಮುದಾಯವನ್ನು ಸಂಪುಟ ಶ್ಲಾಘಿಸುತ್ತದೆ ಎಂದು ಅವರು ಹೇಳಿದರು. ಸ್ನಾಯು ಪುನರುತ್ಪಾದನೆ, ಪಾಚಿ ಮತ್ತು ಸೂಕ್ಷ್ಮಜೀವಿಯ ಬೆಳವಣಿಗೆ, ಬೆಳೆ ಕಾರ್ಯಸಾಧ್ಯತೆ, ಸೂಕ್ಷ್ಮಜೀವಿಯ ಬದುಕುಳಿಯುವಿಕೆ, ಬಾಹ್ಯಾಕಾಶದಲ್ಲಿ ಅರಿವಿನ ಕಾರ್ಯಕ್ಷಮತೆ ಮತ್ತು ಸೈನೋಬ್ಯಾಕ್ಟೀರಿಯಾದ ನಡವಳಿಕೆಯಂತಹ ವಿಷಯಗಳ ಮೇಲೆ ಸೂಕ್ಷ್ಮ ಗುರುತ್ವಾಕರ್ಷಣೆಯಲ್ಲಿ ಪ್ರವರ್ತಕ ಪ್ರಯೋಗಗಳನ್ನು ನಡೆಸಿದ್ದಾರೆ ಎಂದು ಸಚಿವರು ತಿಳಿಸಿದರು.

**ಧ್ವನಿ : ಅಶ್ವಿನಿ ವೈಷ್ಣವ್ (೨೭ ಸೆಕೆಂಡ್‌ಗಳು)**

<><><><>

ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಪಬಿತ್ರಾ ಮಾರ್ಗರಿಟಾ ಇದೇ ೧೮ ರಿಂದ ೨೨ ರವರೆಗೆ ಲೆಸೊಥೊದ ಎಸ್ವಾಟಿನಿಗೆ ಮತ್ತು ಇದೇ ೨೩ ರಿಂದ ೨೫ ರವರೆಗೆ ದಕ್ಷಿಣ ಆಫ್ರಿಕಾಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಎಸ್ವಾಟಿನಿಗೆ ಭೇಟಿ ನೀಡಿ, ರಾಜ ೩ನೇ ಎಂಸ್ವಾಟಿನಿ ಮತ್ತು ಪ್ರಧಾನ ಮಂತ್ರಿ ಅವರನ್ನು ಭೇಟಿ ಮಾಡಲಿದ್ದಾರೆ. ಬಳಿಕ ಅವರು, ದ್ವಿಪಕ್ಷೀಯ ಸಂಬಂಧಗಳ ಪ್ರಗತಿಯನ್ನು ಪರಿಶೀಲಿಸಲು ಎಸ್ವಾಟಿನಿ ವಿದೇಶಾಂಗ ಸಚಿವರೊಂದಿಗೆ ಸಭೆ ನಡೆಸುವ ನಿರೀಕ್ಷೆಯಿದೆ.

<><><><>

ಜಾರ್ಖಂಡ್‌ನ ಬೊಕಾರೊ ಜಿಲ್ಲೆಯಲ್ಲಿ ಇಂದು ಭದ್ರತಾ ಪಡೆಗಳು ಮತ್ತು ನಕ್ಸಲರ ನಡುವಿನ ಗುಂಡಿನ ಚಕಮಕಿಯಲ್ಲಿ ಇಬ್ಬರು ನಕ್ಸಲರು ಸಾವನ್ನಪ್ಪಿದ್ದಾರೆ. ಸಿಪಿಐ ಮಾವೋವಾದಿ ಉಪ-ವಲಯ ಕಮಾಂಡರ್ ಕುನ್ವರ್ ಮಾಂಝಿ ಅಲಿಯಾಸ್ ಶಹದಿಯೊ ಮಾಂಝಿ ಅವರ ತಲೆಗೆ ೫ ಲಕ್ಷ ರೂಪಾಯಿಗಳ ಬಹುಮಾನ ಘೋಷಿಸಲಾಗಿತ್ತು. ಇಂದು ಭದ್ರತಾ ಪಡೆಗಳು ಮಾಂಝಿ ಅವರನ್ನು ಹೊಡೆದುರುಳಿಸಿವೆ.

<><><><>

ಭಾರತ ಮತ್ತು ಇಂಗ್ಲೆಂಡ್ ತಂಡಗಳ ನಡುವಿನ ಮೂರು ಪಂದ್ಯಗಳ ಮಹಿಳಾ ಏಕದಿನ ಕ್ರಿಕೆಟ್ ಸರಣಿ ಇಂದಿನಿಂದ ಆರಂಭವಾಗಿದೆ. ಇಂಗ್ಲೆಂಡ್‌ನ ಸೌಥ್ ಆಂಪ್ಟನ್ ನಲ್ಲಿ ಭಾರತೀಯ ಕಾಲಮಾನ ಸಂಜೆ ೫.೩೦ ಕ್ಕೆ ಆರಂಭವಾದ ಪಂದ್ಯದಲ್ಲಿ ಟಾಸ್ ಗೆದ್ದ ಇಂಗ್ಲೆಂಡ್ ತಂಡ ಬ್ಯಾಟಿಂಗ್ ಆಯ್ದುಕೊಂಡಿದ್ದು, ಇತ್ತೀಚಿನ ವರದಿ ಪ್ರಕಾರ ೩೦ ಓವರ್ ಗಳಿಗೆ ೪ ವಿಕೆಟ್ ಕಳೆದುಕೊಂಡು ೧೩೭ ರನ್ ಗಳಿಸಿ ಆಡುತ್ತಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>